ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/315/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:04-03-2023

# ಸುತ್ತೋಲೆ

ವಿಷಯ: 2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿ:09.02.2023.

*******

2022-23ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗಿರುವ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ದಿನಾಂಕ:04.02.2023 ರಿಂದ ದಿನಾಂಕ:08.02.2023 ರವರೆಗೆ ನಡೆದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಅಭ್ಯರ್ಥಿಗಳು ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

ಮುಂದುವರೆದು, ದಿನಾಂಕ:27.02.2023 ರಂದು ಮತ್ತೊಮ್ಮೆ ಆನ್‌ಲೈನ್ ಕೌನ್ಸಿಲಿಂಗ್ ಅನ್ನು ನಡೆಸಲಾಗಿದ್ದು, ಸದರಿ ದಿನದ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿದ್ದ ಅತಿಥಿ ಉಪನ್ಯಾಸಕರು ಅವರ ಆಯ್ಕೆಯ ಕಾಲೇಜನ್ನು ಆಯ್ಕೆ ಮಾಡಿಕೊಂಡಿದ್ದು, ಆಯ್ಕೆ ಮಾಡಿಕೊಂಡ ಅಭ್ಯರ್ಥಿವಾರು ಕಾಲೇಜುಗಳ ಪಟ್ಟಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ.

ಅಭ್ಯರ್ಥಿಗಳು ಆಯ್ಕೆಪಟ್ಟಿಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದ ದಿನಾಂಕದಿಂದ ಸಂಬಂಧಪಟ್ಟ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗಲು 03 ಕರ್ತವ್ಯದ ದಿನಗಳವರೆಗೆ ಮಾತ್ರ ಅವಕಾಶವಿರುತ್ತದೆ. ಅದರಂತೆ ಪ್ರಾಂಶುಪಾಲರು ಅತಿಥಿ ಉಪನ್ಯಾಸಕರನ್ನು ಲಭ್ಯವಿರುವ ಕಾರ್ಯಭಾರದ ಎದುರಾಗಿ ನಿಯಮಾನುಸಾರ ಕರ್ತವ್ಯಕ್ಕೆ ಹಾಜರುಪಡಿಸಿಕೊಂಡು, E.M.I.S ನಲ್ಲಿ ಕಡ್ಡಾಯವಾಗಿ upload ಮಾಡುವುದು.

**(ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

04/03/2023

**ಮುಖ್ಯ ಆಡಳಿತಾಧಿಕಾರಿಗಳು**
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ:**

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಸಂಬಂಧಪಟ್ಟ ಅತಿಥಿ ಉಪನ್ಯಾಸಕರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4. ಕಛೇರಿ ಪ್ರತಿ